# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನ UPSC / KAS / Banking / Group-C / SSC / RRB / Judicial Services ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿಗೆ ಅರ್ಜಿ ಸಲ್ಲಿಸುವ ಸಫಾಯಿ ಕರ್ಮಚಾರಿ /ಸರ್ಕಾರದಿಂದ ಗುರುತಿಸಲ್ಪಟ್ಟ Manual Scavengers ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸದೆ ತರಬೇತಿಗೆ ನೇರವಾಗಿ ಆಯ್ಕೆ ಮಾಡುವ ಬಗ್ಗೆ.

**ಓದಲಾಗಿದೆ:** ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ ಇವರ ಏಕಕಡತ ಸಂಖ್ಯೆ:SWD-PETC0S-7/2/2024-PETC(E-1309452).

******

**ಪ್ರಸ್ತಾವನೆ :**

ಮೇಲೆ ಓದಲಾದ ಏಕಕಡತದ ಪ್ರಸ್ತಾವನೆಯಲ್ಲಿ ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು ಇವರು ಪ್ರತಿ ವರ್ಷ ತರಬೇತಿಗೆ ನಿಯೋಜಿಸುವ ಅಭ್ಯರ್ಥಿಗಳ ಒಟ್ಟಾರೆ ಗುರಿಯಲ್ಲಿ 5% ರಷ್ಟು ಸ್ಥಾನಗಳನ್ನು ಸಫಾಯಿ ಕರ್ಮಚಾರಿ ಅಭ್ಯರ್ಥಿಗಳಿಗೆ ಮೀಸಲಿಡಲಾಗಿದ್ದು, 2022-23 ನೇ ಸಾಲಿನ UPSC / KAS / Banking / Group-C / SSC / RRB / Judicial Services ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿಗೆ ಅರ್ಜಿ ಸಲ್ಲಿಸುವ ಸಫಾಯಿ ಕರ್ಮಚಾರಿ / ಸರ್ಕಾರದಿಂದ ಗುರುತಿಸಲ್ಪಟ್ಟ Manual Scavengers ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸದೆ ತರಬೇತಿಗೆ ನೇರವಾಗಿ ಆಯ್ಕೆ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಸಕಇ 501 ಎಸ್.ಡಿ.ಸಿ 2022, ದಿನಾಂಕ: 19.09.2022ರಲ್ಲಿ ಅನುಮತಿ ನೀಡಿ ಆದೇಶಿಸಲಾಗಿದೆ. ಅದರಂತೆ 2023-24ನೇ ಸಾಲಿನ ಅವಧಿಯಲ್ಲೂ 2022-23ನೇ ಸಾಲಿನಂತೆ ಸಫಾಯಿ ಕರ್ಮಚಾರಿ/ಸರ್ಕಾರದಿಂದ ಗುರುತಿಸಲ್ಪಟ್ಟ Manual Scavengers ಗೆ ಸೇರಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಯಾವುದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸದೆ ಪದವಿಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ತರಬೇತಿಗೆ ನಿಯೋಜಿಸಲು ಅನುಮತಿ ನೀಡಲು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ.

..2

**ಸರ್ಕಾರದ ಆದೇಶ ಸಂಖ್ಯೆ: ಸಕಇ 126 ಎಸ್ ಎಲ್ ಪಿ 2024 ಬೆಂಗಳೂರು,**
**ದಿನಾಂಕ: 06.03.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಂತೆ, 2023-24ನೇ ಸಾಲಿನಲ್ಲಿಯೂ ಸಫಾಯಿ ಕರ್ಮಚಾರಿ/ಸರ್ಕಾರದಿಂದ ಗುರುತಿಸಲ್ಪಟ್ಟ Manual Scavengers ಗೆ ಸೇರಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಯಾವುದೇ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸದೆ ಪದವಿಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ತರಬೇತಿಗೆ ನಿಯೋಜಿಸಲು ಅನುಮತಿ ನೀಡಿ ಆದೇಶಿಸಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

6/3

(ಎಲ್ ನರಸಿಂಹಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.
6/3/2024

**ಇವರಿಗೆ:-**

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಅಪರ ನಿರ್ದೇಶಕರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು.
6. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
7. ಎಲ್ಲಾ ಜಂಟಿ/ಉಪ ನಿರ್ದೇಶಕರುಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.

*******